# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 486

ಸದಸ್ಯರ ಹೆಸರು : ಶ್ರೀ ಎಂ.ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 10-07-2023

ಉತ್ತರಿಸುವ ಸಚಿವರು : ಮಾನ್ಯ ಇಂಧನ ಸಚಿವರು

***

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಜನತೆಗೆ ಇಂಧನ ಇಲಾಖೆ ವತಿಯಿಂದ 'ಗೃಹ ಜ್ಯೋತಿ' ಯೋಜನೆಯಡಿಯಲ್ಲಿ 200 ಯೂನಿಟ್ ವಿದ್ಯುತ್ ಉಚಿತವಾಗಿ ಪೂರೈಸುವ ಕಾರ್ಯಕ್ರಮ ಯಾವಾಗ ಪ್ರಾರಂಭವಾಗುವುದು (ಸವಿಸ್ತಾರವಾದ ಮಾಹಿತಿಯನ್ನು ನೀಡುವುದು) | ರಾಜ್ಯದ ಜನತೆಗೆ ಇಂಧನ ಇಲಾಖೆ ವತಿಯಿಂದ "ಗೃಹ ಜ್ಯೋತಿ" ಯೋಜನೆಯಡಿಯಲ್ಲಿ 200 ಯೂನಿಟ್ ವಿದ್ಯುತ್ ಉಚಿತವಾಗಿ ಪೂರೈಸುವ ಕಾರ್ಯಕ್ರಮವನ್ನು ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/164/ಪಿಎಸ್‌ಆರ್/2023 ದಿನಾಂಕ: 05.06.2023 ರನ್ವಯ ಜುಲೈ 2023 ರ ತಿಂಗಳ ವಿದ್ಯುತ್ ಬಳಕೆಗೆ ಆಗಸ್ಟ 2023 ರ ತಿಂಗಳಿಂದ ನೀಡುವ ಬಿಲ್ಲಿಗೆ ಅನ್ವಯವಾಗುವಂತೆ ಜಾರಿಗೆ ತರಲು ಆದೇಶಿಸಲಾಗಿದೆ.<br><br>ಮುಂದುವರೆದು, ಆದೇಶದಲ್ಲಿ "ಗೃಹ ಜ್ಯೋತಿ" ಯೋಜನೆಯಡಿ ರಾಜ್ಯದಲ್ಲಿನ ಪ್ರತಿ ಮನೆಗೆ ಪ್ರತಿ ತಿಂಗಳಿಗೆ ಗರಿಷ್ಟ 200 ಯೂನಿಟ್‌ಗಳವರೆಗಿನ ಬಳಕೆಯ ಮಿತಿಯಲ್ಲಿ ಪ್ರತಿ ಗ್ರಾಹಕರ ಮಾಸಿಕ ಸರಾಸರಿ ಬಳಕೆಯ (ಆರ್ಥಿಕ ವರ್ಷ 2022-23 ರ ಬಳಕೆಯ ಆಧಾರದನ್ವಯ) ಯೂನಿಟ್‌ಗಳ ಮೇಲೆ ಶೇ.10 ರಷ್ಟು ಹೆಚ್ಚಿನ ಬಳಕೆಯ ಮಿತಿಯನ್ನು ಅನುಮತಿಸಿ, ಅದಕ್ಕನುಗುಣವಾಗಿ ವಿದ್ಯುತ್ ಬಿಲ್ಲಿನ ಮೊತ್ತವನ್ನು ಉಚಿತವಾಗಿ ಒದಗಿಸಲು ಹಾಗೂ 200 ಯೂನಿಟ್‌ಗಳ ಬಳಕೆಯನ್ನು ಮೀರಿದ ಗ್ರಾಹಕರು ಪೂರ್ಣ ವಿದ್ಯುತ್ ಬಿಲ್ಲನ್ನು ಪಾವತಿಸಲು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ. |
| ಆ) | ಜನತೆಗೆ 200 ಯೂನಿಟ್ ವಿದ್ಯುತ್ ಉಚಿತವಾಗಿ ನೀಡುವುದರಿಂದ ಉಂಟಾಗುವ ಉಪಯೋಗಗಳು ಮತ್ತು ತೊಂದರೆಗಳೇನು; (ಮಾಹಿತಿ ನೀಡುವುದು) | ಮೂಲಭೂತ ಸೌಕರ್ಯಗಳಲ್ಲಿ ಒದಾಂದ ವಿದ್ಯುಚ್ಛಕ್ತಿಯನ್ನು ಉಚಿತವಾಗಿ ರಾಜ್ಯದ ಗೃಹಬಳಕೆದಾರಿಗೆ ಒದಗಿಸುವುದಾಗಿರುತ್ತದೆ. ಇದರಿಂದಾಗಿ, ಗೃಹ ಬಳಕೆದಾರರಿಗೆ ಅನುಕೂಲವಾಗುತ್ತದೆ.<br><br>ದೈನಂದಿನ ಜೀವನದಲ್ಲಿ ಬಳಕೆಯಾಗುವ ವಸ್ತುಗಳ ಬೆಲೆ ಏರಿಕೆಯಿಂದ ಜನ ತತ್ತರಿಸಿಹೋಗಿದ್ದು, ಗೃಹಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ನೀಡುವುದರಿಂದ, ಉಳಿತಾಯವಾಗುವ ಹಣದಿಂದ ಸಾಮಾನ್ಯ ಜನರ ಖರೀದಿ ಶಕ್ತಿ ಇದರ ಜೊತೆಗೆ ನಾಗರಿಕರಲ್ಲಿ ಹಣ ಉಳಿತಾಯವಾಗುವುದರಿಂದ, ಇವರ Purchasing Power ಹೆಚ್ಚಾಗುತ್ತದೆ. ಇದರಿಂದ, ಉತ್ಪಾದನಾ ವಲಯಕ್ಕೆ ಹೆಚ್ಚು ಪ್ರೋತ್ಸಾಹಧನ ನೀಡಿದಂತಾಗುತ್ತದೆ. ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಉದ್ಯೋಗ ಸೃಷ್ಟಿಸಲು ಸಹಕಾರಿಯಾಗುತ್ತದೆ. ಆರ್ಥಿಕ ಚಟುವಟಿಕೆಗಳು ವೃದ್ಧಿಯಾಗುತ್ತದೆ ಮತ್ತು ಉದ್ಯೋಗ ಸೃಷ್ಟಿಸಲು ಸಾಧ್ಯವಾಗುತ್ತದೆ ಹಾಗೂ ರಾಜ್ಯದ ಆರ್ಥಿಕ ಪರಿಸ್ಥಿತಿ ಸದೃಢವಾಗುತ್ತದೆ. |

| | | |
|---|---|---|
| ಇ) | ಈ ಯೋಜನೆಗಾಗಿ ಸರ್ಕಾರದ ಬೊಕ್ಕಸಕ್ಕೆ ಉಂಟಾಗಬಹುದಾದ ಹೊರೆಯೆಷ್ಟು; ಮತ್ತು ಈ ಹೊರೆಯಿಂದ ವಿದ್ಯುತ್ ಕಂಪನಿಗಳಿಗೆ ನಷ್ಟವುಂಟಾಗದಂತೆ ಸರಿದೂಗಿಸಲು ಸರ್ಕಾರ ಕೈಗೊಳ್ಳಲು ಉದ್ದೇಶಿಸಿರುವ ಮಾರ್ಗಗಳೇನು? (ಮಾಹಿತಿ ನೀಡುವುದು) | ಈ ಯೋಜನೆಯ ಅನುಷ್ಠಾನಕ್ಕಾಗಿ ವಾರ್ಷಿಕವಾಗಿ ಅಂದಾಜು ರೂ.13,910 ಕೋಟಿಗಳ ಸಹಾಯಧನ ಭರಿಸಬೇಕಾಗಿರುತ್ತದೆ.<br>ಸರ್ಕಾರವು ಈ ಮೊತ್ತವನ್ನು ಸಹಾಯಧನದ ರೂಪದಲ್ಲಿ ವಿದ್ಯುತ್ ಸರಬರಾಜು ಕಂಪನಿಗಳಿಗೆ ಒದಗಿಸುತ್ತದೆ. |

ಸಂಖ್ಯೆ: ಎನರ್ಜಿ 139 ಇಬಿಎಸ್ 2023

(ಕೆ.ಜೆ.ಜಾರ್ಜ್)
ಇಂಧನ ಸಚಿವರು